18	ಬೆಳಗಾವಿ	42504
19	ಹಾವೇರಿ	10513
20	ಗದಗ	7979
21	ಬಿಜಾಪುರ	17099
22	ಬಾಗಲಕೋಟೆ	12075
23	ಧಾರವಾಡ	15616
24	ಉತ್ತರ ಕನ್ನಡ	12078
25	ಗುಲ್ಬರ್ಗಾ	24143
26	ಬಳ್ಳಾರಿ	18235
27	ಬೀದರ್	14189
28	ರಾಯಚೂರು	16415
29	ಕೊಪ್ಪಳ	10185
30	ಯಾದಗಿರಿ	2892
31	ಎಸ್.ಕೆ.ಡಿ.ಆರ್.ಡಿ.ಪಿ	9405
	ಒಟ್ಟು	**498234**

ಮೊರಾರ್ಜಿ ದೇಸಾಯಿ ಶಾಲೆ ಪ್ರಾರಂಭಿಸುವುದು

447(948); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ),

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಮೇಖಳಿ ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಮಂಜೂರಾತಿ ನೀಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಕಟ್ಟಡ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು,

ಇ) ಕಟ್ಟಡ ಕಾಮಗಾರಿಗೆ ಬಿಡುಗಡೆ ಮಾಡಲಿರುವ ಹಣವೆಷ್ಟು; ಯಾವಾಗ ಹಣ ಬಿಡುಗಡೆ ಮಾಡಲಾಗುವುದು?

ಶ್ರೀ ಹೆಚ್. ಆಂಜನೇಯ ಸಚಿವರು (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೌದು

ಆ) ಮತ್ತು ಇ) ಶಾಲಾ ಸಂಕೀರ್ಣಕ್ಕೆ ಜಮೀನು ಲಭ್ಯವಾದ ನಂತರ ಕಟ್ಟಡ ನಿರ್ಮಿಸಲು ಹಣ ಬಿಡುಗಡೆ ಮಾಡಲಾಗುವುದು

ಕಾಮಗಾರಿಗಳ ಅನುದಾನ

448(916); ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಉತ್ತರ ಕರ್ನಾಟಕಕ್ಕೆ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಯಾವ ಯಾವ ಕೆಲಸಕ್ಕೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ,

ಆ) ಮಂಜೂರಾಗಿರುವ ಅನುದಾನದಲ್ಲಿ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ.

ಇ) ಉಳಿದಿರುವ ಕಾಮಗಾರಿಗಳು ಯಾವ ಹಂತದಲ್ಲಿವೆ; ಇವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು (ವಿವರವನ್ನು ನೀಡುವುದು)?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಕಳೆದ 03 ವರ್ಷಗಳಲ್ಲಿ ಉತ್ತರ ಕರ್ನಾಟಕದ ಜಿಲ್ಲೆಗಳಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬಿಡುಗಡೆ ಮಾಡಲಾದ ಅನುದಾನದ ವಿವರ ಈ ಕೆಳಕಂಡಂತಿರುತ್ತದೆ

ಆ)

(₹ ಲಕ್ಷಗಳಲ್ಲಿ)

ಕ್ರ ಸಂ	ಕಾರ್ಯಕ್ರಮ	ಮಂಜೂರು ಮಾಡಿದ ಅನುದಾನ	ಕೈಗೊಂಡ ಕಾಮಗಾರಿಗಳ ಸಂಖ್ಯೆ	ಪೂರ್ಣಗೊಂಡ ಕಾಮಗಾರಿಗಳ ಸಂ.
01	ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ	9955 23	79	56
02	ವಿದ್ಯಾರ್ಥಿನಿಲಯಗಳ ಕಟ್ಟಡಗಳ ದುರಸ್ತಿ	6146 45	540	398